## ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 835
ಸದಸ್ಯರ ಹೆಸರು : ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ)
ಉತ್ತರಿಸುವ ದಿನಾಂಕ : 18.12.2018
ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು.

| ಕ್ರ.ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| ಅ | ರಾಜ್ಯದಲ್ಲಿನ ಗ್ರಾಮ ಪಂಚಾಯಿತಿಗಳಿಗೆ ಒಂದು ಹುದ್ದೆಯಂತೆ "ಡೇಟಾ ಎಂಟ್ರಿ ಆಪರೇಟರ್" (ಡಿ.ಟಿ.ಓ) ಹುದ್ದೆಯನ್ನು ನೇಮಕ ಮಾಡುವ ಹಿಂದಿನ ಸರ್ಕಾರದ ಯೋಜನೆ ಸಂಪೂರ್ಣವಾಗಿದೆಯೇ; | ಹೌದು. |
| ಆ | ಇಲ್ಲವಾದಲ್ಲಿ, ಸದರಿ ನೇಮಕಾತಿ ಪ್ರಕ್ರಿಯೆಯು ವಿಳಂಬವಾಗಿರುವುದಕ್ಕೆ ಕಾರಣಗಳೇನು; | ಗ್ರಾಮ ಪಂಚಾಯತಿಗಳಲ್ಲಿ ವಿವಿಧ ಯೋಜನೆಗಳ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಹಾಲಿ ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್‌ಗಳು ಕರ್ತವ್ಯ ನಿರ್ವಹಿಸುತ್ತಿರುತ್ತಾರೆ. ಇವರುಗಳ ಜೊತೆಗೆ ಹೆಚ್ಚುವರಿಯಾಗಿ ಪ್ರತಿ ಗ್ರಾಮ ಪಂಚಾಯತಿಗೆ ಒಂದು ಡಾಟಾ ಎಂಟ್ರಿ ಆಪರೇಟರ್ ಹುದ್ದೆಯನ್ನು ಸೃಜಿಸಿ, ನೇಮಕಾತಿ ಪ್ರಕ್ರಿಯೆಯನ್ನು ಪ್ರಾರಂಭಿಸಲಾಗಿತ್ತು. ಈ ನೇಮಕಾತಿಗೆ ಮೀಸಲಾತಿ ಕಲ್ಪಿಸಬೇಕೆಂಬ ಒತ್ತಾಯ ಬಂದ ಹಿನ್ನೆಲೆಯಲ್ಲಿ ನೇಮಕಾತಿಯನ್ನು ತಡೆ ಹಿಡಿದು ಮೀಸಲಾತಿ ಕಲ್ಪಿಸಲು ಹೊಸ ನೇಮಕಾತಿ ವಿಧಾನ ಜಾರಿಗೊಳಿಸುವ ಪ್ರಕ್ರಿಯೆ ಪ್ರಾರಂಭಿಸಲಾಗಿದೆ. ಹೀಗಾಗಿ ಈ ನೇಮಕಾತಿ ಪ್ರಕ್ರಿಯೆ ವಿಳಂಬವಾಗಿದೆ. |
| ಇ | ಸದರಿ ನೇಮಕಾತಿ ಪ್ರಕ್ರಿಯೆಯನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು? | ಪರಿಷ್ಕೃತ ನೇಮಕಾತಿ ವಿಧಾನ ರೂಪಿಸಿದ ನಂತರ ಗ್ರಾಮ ಪಂಚಾಯಿತಿಗಳಲ್ಲಿನ ಕಾರ್ಯದ ಒತ್ತಡ ಆಧರಿಸಿ ಹೆಚ್ಚುವರಿ ಡಾಟಾ ಎಂಟ್ರಿ ಆಪರೇಟರ್‌ಗಳನ್ನು ನೇಮಿಸಲು ಕ್ರಮ ಕೈಗೊಳ್ಳಲಾಗುವುದು. |

ಸಂಖ್ಯೆ. ಗ್ರಾಅಪ 1247 ಗ್ರಾಪಂಅ 2018

(ಕೃಷ್ಣ ಬೈರೇಗೌಡ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್,
ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು
ಹಾಗೂ ಸಂಸದೀಯ ವ್ಯವಹಾರಗಳ ಸಚಿವರು.